ಕರ್ನಾಟಕ ಸರ್ಕಾರ

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕು ಚಿಕ್ಕಯಡಚಿ ಗ್ರಾಮವನ್ನು ಗ್ರಾಮ ಪಂಚಾಯತಿಯನ್ನಾಗಿ ರಚಿಸುವ ಬಗ್ಗೆ.

ಓದಲಾಗಿದೆ: 1. ಹಾವೇರಿ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ ಗ್ರಾಪಂಚು:ವಹಿ:05:2009-10 ದಿನಾಂಕ 25.02.2015.

2. ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರ ಪತ್ರ ಸಂಖ್ಯೆ ಪ್ರಾಆಬೆ:ಗ್ರಾಪಂ:ಪುಅ(ಹಾವೇರಿ ಜಿಲ್ಲೆ):02:2014-15, ದಿನಾಂಕ 17.03.2015.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರ ಪತ್ರಗಳಲ್ಲಿ ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿನ ಶಿರಗಂಬಿ ಗ್ರಾಮ ಪಂಚಾಯತಿಯಿಂದ ಚಿಕ್ಕಯಡಚಿ ಮತ್ತು ಹಿರೇಯಡಚಿ ಗ್ರಾಮಗಳನ್ನು ಪ್ರತ್ಯೇಕಿಸಿ ಹಾಗೂ ತಾವರಗಿ ಗ್ರಾಮ ಪಂಚಾಯತಿಯಿಂದ ಕ್ಯಾತನಕೇರಿ ಗ್ರಾಮವನ್ನು ಪ್ರತ್ಯೇಕಿಸಿ, ಚಿಕ್ಕಯಡಚಿ, ಹಿರೇಯಡಚಿ ಮತ್ತು ಕ್ಯಾತನಕೇರಿ ಗ್ರಾಮಗಳನ್ನೊಳಗೊಂಡ ಚಿಕ್ಕಯಡಚಿ ಗ್ರಾಮ ಪಂಚಾಯತಿಯನ್ನು ರಚಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. 2011 ರ ಜನಗಣತಿಯ ಪ್ರಕಾರ ಚಿಕ್ಕಯಡಚಿ ಗ್ರಾಮ ಪಂಚಾಯತಿಯ ಒಟ್ಟು ಜನಸಂಖ್ಯೆ 3100, ಶಿರಗಂಬಿ ಗ್ರಾಮ ಪಂಚಾಯತಿಯ ಒಟ್ಟು ಜನಸಂಖ್ಯೆ 3236 ಮತ್ತು ತಾವರಗಿ ಗ್ರಾಮ ಪಂಚಾಯತಿಯ ಒಟ್ಟು ಜನಸಂಖ್ಯೆ 3996 ಆಗಿರುತ್ತದೆ.

ಚಿಕ್ಕಯಡಚಿ ಗ್ರಾಮದಿಂದ ಹಿರೇಯಡಚಿ ಗ್ರಾಮವು 01 ಕಿ.ಮೀ. ಹಾಗೂ ಕ್ಯಾತನಕೇರಿ ಗ್ರಾಮವು 02 ಕಿ.ಮೀ. ದೂರವಿರುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುವುದು. ಚಿಕ್ಕಯಡಚಿ ಗ್ರಾಮದಲ್ಲಿ ಎಲ್ಲ ಮೂಲಸೌಲಭ್ಯಗಳಿದ್ದು, ಮಲೆನಾಡು ಪ್ರದೇಶಾಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಬರುವುದರಿಂದ ಮತ್ತು ಗ್ರಾಮಗಳ ಅಭಿವೃದ್ಧಿ ಕಾರ್ಯಕ್ಕೆ ಒತ್ತು ಸಿಗುವುದರಿಂದ ಚಿಕ್ಕಯಡಚಿ, ಹಿರೇಯಡಚಿ ಮತ್ತು ಕ್ಯಾತನಕೇರಿ ಗ್ರಾಮಗಳನ್ನೊಳಗೊಂಡ ಚಿಕ್ಕಯಡಚಿ ಗ್ರಾಮ ಪಂಚಾಯತಿಯನ್ನು ಸೃಜಿಸಲು ಚಿಕ್ಕಯಡಚಿ ಗ್ರಾಮಸ್ಥರು ಕೋರಿರುವುದಾಗಿ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ತಮ್ಮ ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ. ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿದೆ.

ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ಚಿಕ್ಕಯಡಚಿ, ಹಿರೇಯಡಚಿ ಮತ್ತು ಕ್ಯಾತನಕೇರಿ ಗ್ರಾಮಗಳನ್ನೊಳಗೊಂಡ ಚಿಕ್ಕಯಡಚಿ ಗ್ರಾಮ ಪಂಚಾಯತಿಯನ್ನು ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಕಾರಣಗಳಿಂದಾಗಿ ರಚಿಸಬೇಕಾಗಿದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು, ಜಿಲ್ಲಾದಿಕಾರಿಗಳು ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಚಿಕ್ಕಯಡಚಿ, ಹಿರೇಯಡಚಿ ಮತ್ತು ಕ್ಯಾತನಕೇರಿ ಗ್ರಾಮಗಳನ್ನೊಳಗೊಂಡ ಚಿಕ್ಕಯಡಚಿ ಗ್ರಾಮ ಪಂಚಾಯತಿಯನ್ನು ರಚಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 804 ಗ್ರಾಪಂಅ 2015,**

**ಬೆಂಗಳೂರು, ದಿನಾಂಕ: 06.04.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ಶಿರಗಂಬಿ ಗ್ರಾಮ ಪಂಚಾಯತಿಯಿಂದ ಚಿಕ್ಕಯಡಚಿ ಮತ್ತು ಹಿರೇಯಡಚಿ ಗ್ರಾಮಗಳನ್ನು ಪ್ರತ್ಯೇಕಿಸಿ ಹಾಗೂ ತಾವರಗಿ ಗ್ರಾಮ ಪಂಚಾಯತಿಯಿಂದ ಕ್ಯಾತನಕೇರಿ ಗ್ರಾಮವನ್ನು ಪ್ರತ್ಯೇಕಿಸಿ, ಚಿಕ್ಕಯಡಚಿ, ಹಿರೇಯಡಚಿ ಮತ್ತು ಕ್ಯಾತನಕೇರಿ ಗ್ರಾಮಗಳನ್ನೊಳಗೊಂಡ ಚಿಕ್ಕಯಡಚಿ ಗ್ರಾಮ ಪಂಚಾಯತಿಯನ್ನು ಹೊಸದಾಗಿ ರಚಿಸಲು ಸರ್ಕಾರ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 93 ವೆಚ್ಚ-6/2016, ದಿನಾಂಕ 29.03.2016 ರ ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

6/4/2016

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಪ್ರಾದೇಶಿಕ ಆಯುಕ್ತರು, ಬೆಳಗಾವಿ.
3. ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ.
5. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
10. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಶಿರಗಂಬಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
11. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಾವರಗಿ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6)/ಯೋಜನಾ ಇಲಾಖೆ.
13. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
14. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
15. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.